**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1123/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಕೌಶಿಕ್ ಬಿ.ಸಿ. | ಪ್ರಾಸಾ-10 |
| ತಂದೆಯ ಹೆಸರು | : ಚಂದ್ರಶೇಖರ್ | ಚಾಸಾ-14 |
| ವಯಸ್ಸು | : 35 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 07.07.2026. |
| ವಾಸಸ್ಥಳ | : ಉಪ್ಪಿನಂಗಡಿ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ಫೆಬ್ರವರಿ 2024 ರಿಂದ ಜುಲೈ 2024 ರವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.25.03.2024 ರಂದು ಪ್ರಕರಣದ ಕಡತವನ್ನು ಚಾಸಾ-13 ರವರಿಂದ ಸ್ವೀಕರಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ-4 ರವರಿಗೆ ಚಾಸಾ-1 ರವರು ಸಾಲ ಪಡೆದುಕೊಂಡಿರುವ ಬಾಬ್ತು ವರದಿಯನ್ನು ನೀಡುವಂತೆ ಮನವಿ ಮಾಡಿಕೊಂಡಿರುತ್ತೇನೆ. ದಿ.09.05.2024 ರಂದು ಚಾಸಾ-4 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ತನಿಖೆಯು ಪೂರ್ಣಗೊಂಡಿದ್ದು ಆರೋಪಿಯ ವಿರುದ್ಧ ಆರೋಪವು ಸಾಬೀತಾದ ಕಾರಣ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಕೊಂಡಿರುತ್ತೇನೆ.

ಸಾಕ್ಷಿಯು ದಿ.25.03.2024 ರಂದು ಚಾಸಾ-4 ರವರಿಗೆ ನೀಡಿದ ಮನವಿ ಪ್ರತಿಯನ್ನು ನಿಪಿ-15, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು. ಚಾಸಾ-4 ರವರ ಹೇಳಿಕೆಯನ್ನು ನಿಪಿ-7 ರಂತೆ ಪಡೆದುಕೊಂರುತ್ತೇನೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ಎಂ.ಆರ್. ವಕೀಲರಿಂದಃ**

ಚಾಸಾ-4 ರವರಿಗೆ ಯಾರ ಮುಖೇನ ಮನವಿ ಮಾಡಿಕೊಂಡಿರುತ್ತೇನೆ ಎಂದು ನನಗೆ ನೆನಪಿರುವುದಿಲ್ಲ. ಸದರಿಯವರಿಂದ ವರದಿಯನ್ನು ಯಾರ ಮುಖೇನ ಪಡೆದುಕೊಂಡಿರುತ್ತೇನೆ ಎಂದು ನನಗೆ ನೆನಪಿಲ್ಲ. ಚಾಸಾ-4 ರವರಿಂದ ನಾನು ಯಾವುದೇ ವರದಿಯನ್ನು ಸ್ವೀಕರಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ದಾಖಲಾತಿಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಆರೋಪವು ಸಾಬೀತಾಗದೇ ಇದ್ದರು ಇಲಾಖಾ ಅಂಕಿ ಅಂಶಕ್ಕೋಸ್ಕರ ಸುಳ್ಳು ಪ್ರಕರಣವನ್ನು ದಾಖಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ**.,** ಮೂಡಿಗೆರೆ.